# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: "ಸ್ವಾವಲಂಬನ" ವಿಮಾ ಯೋಜನೆಯಡಿ 1.12ಲಕ್ಷ ವಿಕಲಚೇತನರಿಗೆ ರೂ.357/-ಗಳ ವಾರ್ಷಿಕ ಕಂತನ್ನು ಪಾವತಿಸುವ ಹೊಸ ಯೋಜನೆಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ

ಓದಲಾಗಿದೆ: 1. 2017-18ನೇ ಸಾಲಿನ ಆಯವ್ಯಯ ಘೋಷಣೆ
2. ನಿರ್ದೇಶಕರು ವಿ.ಹಿ.ನಾ.ಸ.ಇಲಾಖೆ ಇವರ ಏಕ ಕಡತ ಸಂಖ್ಯೆ: ಇಸಿ/ಸಿ.2/ಯೋಜನೆ/ಸ್ವಾವಲಂಬನ/03/2017-18

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರಲ್ಲಿ ಮಾನ್ಯ ಮುಖ್ಯಮಂತ್ರಿಗಳು 2017-18ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿ "ಸ್ವಾವಲಂಬನ" ವಿಮಾ ಯೋಜನೆಯಡಿ 1.12ಲಕ್ಷ ವಿಕಲಚೇತನರಿಗೆ ರೂ.357/- ವಾರ್ಷಿಕ ಕಂತನ್ನು ಪಾವತಿಸಲು ರೂ.4.00 ಕೋಟಿಗಳನ್ನು ಒದಗಿಸಲಾಗುವುದೆಂದು ಘೋಷಿಸಿರುತ್ತಾರೆ.

ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯವು ನ್ಯೂ ಇಂಡಿಯಾ ಅಶೂರೆನ್ಸ್ (New India Assurance Company) ಕಂಪನಿಯ ಸಹಯೋಗದಲ್ಲಿ ವಿಕಲಚೇತನರಿಗೆ ಅಂದರೆ ಅಂಧ, ಮಂದದೃಷ್ಟಿ, ಕುಷ್ಟರೋಗ ನಿವಾರಿತ, ಶ್ರವಣದೋಷ, ಚಲನವಲನ ನ್ಯೂನತೆ, ಬುದ್ಧಿಮಾಂದ್ಯ ಹಾಗೂ ಮಾನಸಿಕ ಅಸ್ವಸ್ಥರಿಗೆ ಅವಶ್ಯವಿರುವ ಆರೋಗ್ಯ ವಿಮೆ ಸೌಲಭ್ಯವನ್ನು ಕಲ್ಪಿಸಲು "ಸ್ವಾವಲಂಬನ" ವಿಮಾ ಯೋಜನೆಯನ್ನು 2015 ರಿಂದ ಅನುಷ್ಠಾನಗೊಳಿಸುತ್ತಿದೆ. ವಿಕಲಚೇತನ ವ್ಯಕ್ತಿಗಳ ಆರೋಗ್ಯ ಸುಧಾರಣೆ ಹಾಗೂ ಅವರ ಜೀವನದ ಗುಣಮಟ್ಟವನ್ನು ಹೆಚ್ಚಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ವಾರ್ಷಿಕ ವರಮಾನ ರೂ.3.00 ಲಕ್ಷಕ್ಕಿಂತ ಕಡಿಮೆ ಇರುವ ಅಂಧ, ಮಂದದೃಷ್ಟಿ, ಕುಷ್ಟರೋಗ ನಿವಾರಿತ, ಶ್ರವಣದೋಷ, ಚಲನವಲನ ನ್ಯೂನತೆ, ಬುದ್ಧಿಮಾಂದ್ಯ ಹಾಗೂ ಮಾನಸಿಕ ಅಸ್ವಸ್ಥರಿಗೆ ಪ್ರತಿ ಫಲಾನುಭವಿಗೆ ರೂ.357/-ಗಳನ್ನು ಸರ್ಕಾರದ ವತಿಯಿಂದ ಪಾವತಿಸಿ ನ್ಯೂ ಇಂಡಿಯಾ ಅಶೂರೆನ್ಸ್ (New India Assurance Company) ಕಂಪನಿಯ ಸಹಯೋಗದೊಂದಿಗೆ ಯೋಜನೆಯನ್ನು ಲೆಕ್ಕ ಶೀರ್ಷಿಕೆ: 2235-02-101-0-99 ಯೋಜನೆ ಉಪಲೆಕ್ಕ ಶೀರ್ಷಿಕೆ 051 ಸಾಮಾನ್ಯ ವೆಚ್ಚದಡಿ 2017-18ನೇ ಸಾಲಿಗೆ ಒದಗಿಸಿರುವ ಆಯವ್ಯಯದಲ್ಲಿ ಅನುಷ್ಠಾನಗೊಳಿಸಲು ಯೋಜನೆಯ ಪರಿಷ್ಕರಣೆ ಹಾಗೂ ತಡೆಪಟ್ಟಿ, ಅಯವ್ಯಯದ ವಿವರಗಳೊಂದಿಗೆ ಸೂಕ್ತ ಆದೇಶ ಹೊರಡಿಸಲು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಏಕ ಕಡತದಲ್ಲಿ ನಿರ್ದೇಶಕರು ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಮಮಇ 112 ಪಿಹೆಚ್‌ಪಿ 2017, ಬೆಂಗಳೂರು, ದಿ:01.06.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ವಿಕಲಚೇತನರಿಗೆ, ಅಂಧ, ಮಂದದೃಷ್ಟಿ, ಕುಷ್ಟರೋಗ ನಿವಾರಿತ, ಶ್ರವಣದೋಷ, ಚಲನವಲನ ನ್ಯೂನತೆ, ಬುದ್ಧಿಮಾಂದ್ಯ ಹಾಗೂ ಮಾನಸಿಕ ಅಸ್ವಸ್ಥರಿಗೆ ಅವಶ್ಯವಿರುವ ಆರೋಗ್ಯ ವಿಮೆ ಸೌಲಭ್ಯವನ್ನು ಕಲ್ಪಿಸಲು "ಸ್ವಾವಲಂಬನ" ವಿಮಾ ಯೋಜನೆಯನ್ನು

ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯದ ಮಾರ್ಗಸೂಚಿಯನ್ನು ಅನುಸರಿಸಿ ವಿಕಲಚೇತನ ವ್ಯಕ್ತಿಗಳನ್ನೊಳಗೊಂಡಂತೆ ಕುಟುಂಬದ ನಾಲ್ವರಿಗೆ ವಾರ್ಷಿಕ ರೂ.2.00 ಲಕ್ಷಗಳವರೆಗೆ ಆಯ್ದ ಆಸ್ಪತ್ರೆಗಳಲ್ಲಿ ಉಚಿತ ವೈದ್ಯಕೀಯ ಚಿಕಿತ್ಸಾ ಸೌಲಭ್ಯಗಳನ್ನು ಒದಗಿಸಲು ವಾರ್ಷಿಕ ವರಮಾನ ರೂ.3.00 ಲಕ್ಷಕ್ಕಿಂತ ಕಡಿಮೆ ಇರುವ ಪ್ರತಿ ಫಲಾನುಭವಿಗೆ ನ್ಯೂ ಇಂಡಿಯಾ ಅಶೂರೆನ್ಸ್ (New India Assurance Company) ಕಂಪನಿಯ ಸಹಯೋಗದೊಂದಿಗೆ 2017-18ನೇ ಸಾಲಿನ ಲೆಕ್ಕ ಶೀರ್ಷಿಕೆ: 2235-02-101-0-99 ಯೋಜನೆ ಉಪಲೆಕ್ಕ ಶೀರ್ಷಿಕೆ 051 ಸಹಾಯಾನುದಾನ ಯೋಜನೆಯಡಿ ಒದಗಿಸಿರುವ ಅನುದಾನದಿಂದಲೇ 1.12ಲಕ್ಷ ವಿಕಲಚೇತನರಿಗೆ ರೂ.357/- ಗಳ ವಾರ್ಷಿಕ ಕಂತನ್ನು ಪಾವತಿಸುವ ಷರತ್ತಿಗೊಳಪಟ್ಟು, ಯೋಜನೆಯನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

ಈ ಆದೇಶವನ್ನು ಕ್ರಮವಾಗಿ ಆರ್ಥಿಕ ಇಲಾಖೆ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ:260 ವೆಚ್ಚ- 10/2017, ದಿನಾಂಕ:12.05.2017 ಮತ್ತು ಪಿಡಿ 95 ಐಎಂಎಂ 2017 ದಿನಾಂಕ:18.05.2017 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

01/6/17
(ಜಯಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ಪ್ರತಿಗಳು:

1. ಪ್ರಧಾನ ಮಹಾಲೇಖಪಾಲರು, (ಜಿ &ಎಸ್ಎಸ್ಎ) ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು, (ಇ & ಆರ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು, (ಎ & ಇ ) ಕರ್ನಾಟಕ, ಹೊಸ ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
4. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10)/ಯೋಜನಾ ಇಲಾಖೆ ಬೆಂಗಳೂರು.
8. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಸರ್ಕಾರದ ಉಪಕಾರ್ಯದರ್ಶಿರವರು, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು

11. ಸರ್ಕಾರದ ಅಧೀನ ಕಾರ್ಯದರ್ಶಿ–1, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಶಾಖಾಧಿಕಾರಿ, ಸ್ವೀಮರ ಶಾಖೆ, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ಶಾಖಾ ರಕ್ಷಾ ಕಡತ/ಒ.ಡಿ.ಜಿ.ಸಿ/ಸೂಚನಾ ಫಲಕ/ಹೆಚ್ಚುವರಿ ಪ್ರತಿಗಳು.